**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ/02/ಇಎಸ್‌ಟಿ(9)/2018/2596

ನಿರ್ದೇಶಕರವರ ಕಛೇರಿ.
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 21/12/2018.

**ಹಿಂಬರಹ**

ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 78 ಹೈಕಉ 2015 ದಿನಾಂಕ:05/12/2018ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್‌ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ ಕೆ.ಜಿ.ಎಫ್.ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ಈ ನಿರ್ದೇಶನಾಲಯದ ಇ.ಎಸ್.ಟಿ.(4)ಎ ವಿಭಾಗಕ್ಕೆ ಮಾಹಿತಿಗಾಗಿ
4. ಈ ನಿರ್ದೇಶನಾಲಯದ ಇ.ಎಸ್.ಟಿ.(2)ಎ ವಿಭಾಗಕ್ಕೆ ಮಾಹಿತಿಗಾಗಿ
5. ನಿರ್ದೇಶಕರ ಆಪ್ತ ಶಾಖೆಗೆ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 78 ಹೈಕಉ 2015

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 05.12.2018

ಸುತ್ತೋಲೆ

ವಿಷಯ: ಅನುಚ್ಛೇದ 371ಜೆ ಅಡಿಯಲ್ಲಿ ತಪ್ಪು ಮಾಹಿತಿಗಳನ್ನು ನೀಡಿ 'ಸ್ಥಳೀಯ ವ್ಯಕ್ತಿ' ಅರ್ಹತಾ ಪ್ರಮಾಣ ಪತ್ರವನ್ನು ಪಡೆದುಕೊಳ್ಳುತ್ತಿರುವ ಕುರಿತು-

ಉಲ್ಲೇಖ: 371ಜೆ ಕುರಿತಾದ ಸಚಿವ ಸಂಪುಟ ಉಪ ಸಮಿತಿ ಸಭೆಯ ದಿನಾಂಕ:17.10.2018ರ ನಡವಳಿಗಳು.

*********

1. ಇತ್ತೀಚಿನ ದಿನಗಳಲ್ಲಿ ಅನುಚ್ಛೇದ 371ಜೆ ಅಡಿಯಲ್ಲಿ ಸತ್ಯ ಸಂಗತಿಗಳನ್ನು ಮರೆಮಾಚಿ ತಪ್ಪು ಮಾಹಿತಿಗಳನ್ನು ನೀಡಿ ಆಯಾ ಜಿಲ್ಲೆಯ ಉಪ ವಿಭಾಗಾಧಿಕಾರಿಗಳಿಂದ 'ಸ್ಥಳೀಯ ವ್ಯಕ್ತಿ' ಅರ್ಹತಾ ಪ್ರಮಾಣ ಪತ್ರಗಳನ್ನು ಪಡೆದುಕೊಂಡು ವ್ಯಕ್ತಿಗಳು ನೌಕರಿಗಳನ್ನು ಮತ್ತು ಮುಂಬಡ್ತಿಗಳನ್ನು ಪಡೆದುಕೊಳ್ಳುತ್ತಿರುವುದನ್ನು ದಿನಾಂಕ:17.10.2018ರಂದು ನಡೆದ ಅನುಚ್ಛೇದ 371ಜೆ ಕುರಿತಾದ ಸಚಿವ ಸಂಪುಟ ಉಪ ಸಮಿತಿಯಲ್ಲಿ ಸುದೀರ್ಘವಾಗಿ ಚರ್ಚಿಸಲಾಗಿರುತ್ತದೆ. ಅಲ್ಲದೇ, ಸ್ಥಳೀಯ ವ್ಯಕ್ತಿಗಳಲ್ಲದವರು ಸ್ಥಳೀಯರಿಗೆ ಮೀಸಲಾದ ಹುದ್ದೆಗಳನ್ನು ತಪ್ಪು ಮಾಹಿತಿ ನೀಡಿ 'ಸ್ಥಳೀಯ ವ್ಯಕ್ತಿ' ಪ್ರಮಾಣ ಪತ್ರಗಳನ್ನು ಪಡೆದುಕೊಂಡು ನೌಕರಿಗಳನ್ನು ಮತ್ತು ಬಡ್ತಿಗಳನ್ನು ಪಡೆಯುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿ ಇನ್ನು ಮುಂದೆ ಯಾವುದೇ ವ್ಯಕ್ತಿಯು ಅನುಚ್ಛೇದ 371ಜೆ ಅಡಿಯಲ್ಲಿ ನಿಗಧಿಪಡಿಸಲಾಗಿರುವುದನ್ನು ಹೊರತುಪಡಿಸಿ ತಪ್ಪು ಮಾಹಿತಿ ನೀಡಿ 'ಸ್ಥಳೀಯ ವ್ಯಕ್ತಿ' ಪ್ರಮಾಣ ಪತ್ರವನ್ನು ಪಡೆದುಕೊಂಡು ಸರ್ಕಾರದಿಂದ ಸಿಗುವ ಸವಲತ್ತುಗಳನ್ನು ಪಡೆದುಕೊಂಡಿದಲ್ಲಿ ಅಂತಹವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಠಿಣ ಕ್ರಮವನ್ನು ಕೈಗೊಳ್ಳಬೇಕಾಗಿ ನಿರ್ಣಯಿಸಲಾಗಿರುತ್ತದೆ.

2. ಕಾರಣ ಈ ಸುತ್ತೋಲೆ ಮೂಲಕ ತಿಳಿಯಪಡಿಸುವುದೇನೆಂದರೆ ಯಾರಾದರೂ ತಪ್ಪು ಮಾಹಿತಿಗಳನ್ನು ನೀಡಿ, 'ಸ್ಥಳೀಯ ವ್ಯಕ್ತಿ' ಪ್ರಮಾಣ ಪತ್ರಗಳನ್ನು ಪಡೆದುಕೊಂಡು ದುರುದ್ದೇಶದಿಂದ ನೌಕರಿಯನ್ನು ಅಥವಾ ಬಡ್ತಿಯನ್ನು ಪಡೆದಿದ್ದಲ್ಲಿ ಅಥವಾ ಇನ್ನಾವುದೇ ಸರ್ಕಾರಿ ಸೌಲಭ್ಯಗಳನ್ನು ಪಡೆದಿದ್ದಲ್ಲಿ ಅಂತಹವರು ಮೊಕದ್ದಮೆಗಳನ್ನು ಎದುರಿಸಬೇಕಾಗುವುದಲ್ಲದೇ ಪಡೆದಂತಹ ಸೌಲಭ್ಯಗಳನ್ನು ಹಿಂದಿರುಗಿಸಬೇಕಾಗುತ್ತದೆ.

------2

3. 'ಸ್ಥಳೀಯ ವ್ಯಕ್ತಿ' ಪ್ರಮಾಣ ಪತ್ರಗಳನ್ನು ನೀಡುವ ಪ್ರಾಧಿಕಾರಗಳು ಸಾರ್ವಜನಿಕರು ಪ್ರಮಾಣ ಪತ್ರ ಕೋರಿ ಸಲ್ಲಿಸುವ ಮನವಿಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಪ್ರಮಾಣ ಪತ್ರಗಳನ್ನು ನೀಡುವಂತೆ ಮತ್ತು ಯಾರಾದರೂ ಸುಳ್ಳು ಮಾಹಿತಿಗಳನ್ನು ನೀಡಿ ಪ್ರಮಾಣ ಪತ್ರಗಳನ್ನು ಪಡೆದು ಸರ್ಕಾರಿ ನೌಕರಿ, ಬಡ್ತಿ ಮತ್ತು ಇತರೆ ಸವಲತ್ತುಗಳನ್ನು ಪಡೆದಿದ್ದರೆ, ಅಂತಹವರಿಗೆ ನೀಡಲಾದ ಸ್ಥಳೀಯ ಅರ್ಹತಾ ಪ್ರಮಾಣ ಪತ್ರವನ್ನು ರದ್ದುಗೊಳಿಸಿ, ನೀಡಲಾದ ಸವಲತ್ತುಗಳನ್ನು ವಾಪಸ್ಸು ಪಡೆಯಲು ಕ್ರಮ ಕೈಗೊಳ್ಳುವಂತೆ ಮತ್ತು ಅಂತಹ ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮಗಳನ್ನು ಕೈಗೊಳ್ಳಲು ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ.

(ಅಂಜುಂ ಪರ್ವೇಜ್)
ಸರ್ಕಾರದ ಕಾರ್ಯದರ್ಶಿ,
ಸಿಆಸು ಇಲಾಖೆ.

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
2. ಎಲ್ಲಾ ಇಲಾಖಾ ಮುಖ್ಯಸ್ಥರು.
3. ಎಲ್ಲಾ ಪ್ರಾದೇಶಿಕ ಆಯುಕ್ತರು.
4. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
5. ಆಡಳಿತಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳು.
7. ಎಲ್ಲಾ ನಿಗಮ/ಮಂಡಳಿಗಳ ಮುಖ್ಯಸ್ಥರುಗಳು.
8. ಶಿಕ್ಷಣ ಇಲಾಖೆಯ ಎಲ್ಲಾ ಹೆಚ್ಚುವರಿ ಆಯುಕ್ತರುಗಳು.
9. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಎಲ್ಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರುಗಳು.
10. ಎಲ್ಲಾ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೋಲೀಸ್, ಈಶಾನ್ಯ ವಲಯ.
11. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಎಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು.
12. ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರುಗಳು.
13. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಎಲ್ಲಾ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು.
14. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಎಲ್ಲಾ ಸಹಾಯಕ ಆಯುಕ್ತರುಗಳು.
15. ಕಾರ್ಯದರ್ಶಿ, ಹೈ-ಕ ಪ್ರದೇಶಾಭಿವೃದ್ಧಿ ಮಂಡಳಿ, ಗುಲ್ಬರ್ಗಾ.
16. ಹೆಚ್ಚುವರಿ ಪ್ರತಿ / ಶಾಖಾ ರಕ್ಷಾ ಕಡತ.